**All India Radio: Bangalore**
**National Bulletin In Kannada**
**07.08.2025 01.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**07.08.2025 01.10 p.m.**
**<><><><>**

ಮುಖ್ಯಾಂಶಗಳು

1. ರೈತರ ಹಿತಾಸಕ್ತಿಯಲ್ಲಿ ಎಂದಿಗೂ ರಾಜಿ ಇಲ್ಲ- ಪ್ರಧಾನಿ ನರೇಂದ್ರ ಮೋದಿ
2. ಮುಂದುವರಿದ ವಿಪಕ್ಷಗಳ ಗದ್ದಲ: ಸಂಸತ್ತಿನ ಉಭಯ ಸದನಗಳ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ
3. ಅಮೆರಿಕದಿಂದ ಹೆಚ್ಚುವರಿ ಸುಂಕ ಹೇರಿಕೆ ನ್ಯಾಯಸಮ್ಮತವಲ್ಲ- ವಿದೇಶಾಂಗ ಸಚಿವಾಲಯ
4. ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ಅವರಿಗೆ ಚುನಾವಣಾ ಆಯೋಗದಿಂದ ಮತ್ತೊಮ್ಮೆ ನೋಟಿಸ್

<><><><>

ಭಾರತವು ತನ್ನ ರೈತರ ಹಿತಾಸಕ್ತಿಗಳಲ್ಲಿ ಎಂದಿಗೂ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಎಂ.ಎಸ್.ಸ್ವಾಮಿನಾಥನ್ ಶತಮಾನೋತ್ಸವ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ದೇಶಿಸಿ ಮಾತನಾಡಿದ ಅವರು, ರೈತರ ಆದಾಯವನ್ನು ಹೆಚ್ಚಿಸಲು ಮತ್ತು ಕೃಷಿ ವೆಚ್ಚವನ್ನು ಕಡಿಮೆ ಮಾಡಲು ಕೇಂದ್ರ ಸರ್ಕಾರ ನಿರಂತರವಾಗಿ ಕೆಲಸ ಮಾಡುತ್ತಿದೆ. ರೈತರ ಶಕ್ತಿಯನ್ನು ರಾಷ್ಟ್ರದ ಪ್ರಗತಿಯ ಅಡಿಪಾಯವೆಂದು ಸರ್ಕಾರ ಗುರುತಿಸಿದೆ ಎಂದರು. ಹಾಲು, ದ್ವಿದಳ ಧಾನ್ಯಗಳು ಮತ್ತು ಸೆಣಬಿನ ಉತ್ಪಾದನೆಯಲ್ಲಿ ಭಾರತ ಇಂದು ವಿಶ್ವದಲ್ಲೇ ಮೊದಲ ಸ್ಥಾನದಲ್ಲಿದೆ. ಕಳೆದ ವರ್ಷ ಭಾರತವು ಆಹಾರ ಉತ್ಪಾದನೆಯಲ್ಲಿ ದಾಖಲೆ ಬರೆದಿದೆ ಎಂದು ಅವರು ತಿಳಿಸಿದರು. ಡಾ. ಎಂ.ಎಸ್.ಸ್ವಾಮಿನಾಥನ್ ಅವರು ಜೀವವೈವಿಧ್ಯತೆಯನ್ನು ಮೀರಿ ಜೈವಿಕ ಸಂತೋಷದ ದೂರದೃಷ್ಟಿಯ ಪರಿಕಲ್ಪನೆಯನ್ನು ನೀಡಿದರು. ಕೃಷಿ ವಿಜ್ಞಾನದಲ್ಲಿ ಅವರ ಪ್ರವರ್ತಕ ಕೆಲಸಕ್ಕಾಗಿ ಡಾ. ಸ್ವಾಮಿನಾಥನ್ ಅವರನ್ನು ವ್ಯಾಪಕವಾಗಿ ಶ್ಲಾಘಿಸಲಾಗುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

ಧ್ವನಿ : ಪ್ರಧಾನಿ (೩೪ ಸೆಕೆಂಡ್‌ಗಳು)

ಹವಾಮಾನ-ನಿರೋಧಕ ಬೆಳೆಗಳ ಹಲವು ವಿಧಗಳನ್ನು ಅಭಿವೃದ್ಧಿಪಡಿಸುವ ಮತ್ತು ಶಾಖ-ನಿರೋಧಕ ಬೆಳೆಗಳ ಮೇಲೆ ಕೇಂದ್ರೀಕರಿಸುವ ಅಗತ್ಯವನ್ನು ಪ್ರಧಾನಿ ಒತ್ತಿ ಹೇಳಿದರು.

<><><><>

ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳ ಗದ್ದಲದ ಹಿನ್ನೆಲೆಯಲ್ಲಿ ಲೋಕಸಭೆಯನ್ನು ಮತ್ತು ರಾಜ್ಯಸಭೆ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ಲೋಕಸಭೆ ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಸ್ಪೀಕರ್ ಓಂ ಬಿರ್ಲಾ ಪ್ರಶ್ನೋತ್ತರ ಅವಧಿಯನ್ನು ನಡೆಸಲು ಮುಂದಾದರು. ಆದರೆ ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ವಿರೋಧ ಪಕ್ಷದ ಸದಸ್ಯರು ಚರ್ಚೆಗೆ ಒತ್ತಾಯಿಸಿ ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಪ್ರತಿಭಟನಾನಿರತ ಸದಸ್ಯರು ತಮ್ಮ ಸ್ಥಾನಗಳಿಗೆ ಹಿಂತಿರುಗುವಂತೆ ಅವರು ಪದೇ ಪದೆ ಮನವಿ ಮಾಡಿದರು. ಗದ್ದಲದ ನಡುವೆ, ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವ ಮನೋಹರ್ ಲಾಲ್, ಸ್ಮಾರ್ಟ್ ಸಿಟಿ ಯೋಜನೆ ಸ್ಥಿತಿಗತಿಗೆ ಸಂಬಂಧಿಸಿದ ಪ್ರಶ್ನೆಗೆ ಉತ್ತರಿಸಿದರು. ಗದ್ದಲ ಮುಂದುವರಿದಂತೆ, ಸ್ಪೀಕರ್ ಮಧ್ಯಾಹ್ನ ೧೨ ಗಂಟೆಗೆ ಸದನವನ್ನು ಮುಂದೂಡಿದರು. ನಂತರ ಪುನಃ ೧೨ ಗಂಟೆಗೆ ಸದನ ಸೇರಿದಾಗ ವಿಪಕ್ಷಗಳ ಪ್ರತಿಭಟನೆ ಮುಂದುವರಿದ ಕಾರಣ, ಸದನವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಯಿತು. ಇನ್ನೊಂದೆಡೆ, ರಾಜ್ಯಸಭೆಯಲ್ಲಿ ಬೆಳಗ್ಗೆ ೧೧ ಗಂಟೆಗೆ ಸದನವು ಸಮಾವೇಶಗೊಂಡಾಗ, ಉಪ ಸಭಾಪತಿ ಹರಿವಂಶ್, ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ನಾನಾ ರಾಜಕೀಯ ಪಕ್ಷಗಳಿಂದ ೨೫ ಮುಂದೂಡಿಕೆ ಸೂಚನೆಗಳನ್ನು ಸ್ವೀಕರಿಸಲಾಗಿದೆ. ಆದರೆ ತೀರ್ಪನ್ನು ಉಲ್ಲೇಖಿಸಿ ಸೂಚನೆಗಳನ್ನು ತಿರಸ್ಕರಿಸಲಾಯಿತು ಎಂದು ಹೇಳಿದರು. ವಿರೋಧ ಪಕ್ಷದ ಸದಸ್ಯರು ತಮ್ಮ ಸ್ಥಾನಗಳಿಗೆ ಹಿಂತಿರುಗಿ ಸದನವನ್ನು ಕಾರ್ಯನಿರ್ವಹಿಸಲು ಅವಕಾಶ ನೀಡುವಂತೆ ಅವರು ಮನವಿ ಮಾಡಿದರು. ಆದರೆ ಗದ್ದಲ ಮುಂದುವರಿದಂತೆ, ಉಪಸಭಾಪತಿಯವರು ಸದನವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು.

<><><><>

ಭಾರತದ ಅತ್ಯಂತ ಸವಾಲಿನ ರೈಲ್ವೆ ಯೋಜನೆಗಳಲ್ಲಿ ಒಂದಾದ ಇತ್ತೀಚೆಗೆ ಕಾರ್ಯಾರಂಭ ಮಾಡಿದ ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲು ಸಂಪರ್ಕವನ್ನು ಜಾಗತಿಕ ಮಟ್ಟದ

ಸುರಕ್ಷತಾ ಕ್ರಮಗಳೊಂದಿಗೆ ನಿರ್ಮಿಸಲಾಗಿದ್ದು, ಹಿಮಾಲಯದ ಪರಿಸರಕ್ಕೆ ಯಾವುದೇ ಅಡಚಣೆಯಾಗದಂತೆ ನೋಡಿಕೊಳ್ಳಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಮಾತನಾಡಿದ ಅವರು, ಉಧಂಪುರ, ರಿಯಾಸಿ, ರಾಂಬನ್, ಅನಂತ್‌ನಾಗ್, ಪುಲ್ವಾಮಾ, ಬುಡ್ಗಮ್, ಶ್ರೀನಗರ ಮತ್ತು ಬಾರಾಮುಲ್ಲಾ ಜಿಲ್ಲೆಗಳನ್ನು ಹಾದುಹೋಗುವ ೨೭೨ ಕಿಲೋ ಮೀಟರ್ ಯೋಜನೆಯು ಚೆನಾಬ್ ನದಿಯ ಮೇಲೆ ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆ ಮತ್ತು ಅಂಜಿ ಖಾದ್ ಮೇಲೆ ಭಾರತೀಯ ರೈಲ್ವೆಯ ಮೊದಲ ಕೇಬಲ್ ಆಧಾರಿತ ಸೇತುವೆಯನ್ನು ಒಳಗೊಂಡಿದೆ ಎಂದರು. ಈ ಯೋಜನೆಯಿಂದ ೫ ಕೋಟಿಗೂ ಹೆಚ್ಚು ಮಾನವ ದಿನಗಳ ಉದ್ಯೋಗವನ್ನು ಸೃಷ್ಟಿಸಲಾಗಿದೆ ಹಾಗೂ ಸುರಂಗಗಳು ಮತ್ತು ૩೨೦ ಸೇತುವೆಗಳು ಸೇರಿದಂತೆ ೨೧೫ ಕಿಲೋ ಮೀಟರ್ ಮಾರ್ಗ ರಸ್ತೆಗಳನ್ನು ನಿರ್ಮಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ.

<><><><>

ಸಂಸತ್ತಿನ ಕಲಾಪಗಳಿಗೆ ವಿರೋಧ ಪಕ್ಷದ ಸಂಸದರು ಅಡ್ಡಿಪಡಿಸುತ್ತಿರುವ ಬಗ್ಗೆ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಂವಿಧಾನಿಕ ಮತ್ತು ಸಂಸದೀಯ ಕಾರ್ಯವಿಧಾನಗಳು ಮತ್ತು ನಿಯಮಗಳ ಪ್ರಕಾರ, ಪ್ರತಿಯೊಂದು ವಿಷಯದ ಬಗ್ಗೆಯೂ ಚರ್ಚೆಗೆ ಸರ್ಕಾರ ಸಿದ್ಧವಾಗಿದೆ ಎಂದು ಅವರು ತಿಳಿಸಿದರು. ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆಯಲ್ಲಿದೆ ಮತ್ತು ಅದನ್ನು ಸದನದಲ್ಲಿ ಚರ್ಚಿಸಲು ಸಾಧ್ಯವಿಲ್ಲ ಎಂದು ಸಚಿವ ಕಿರಣ್ ರಿಜಿಜು ಹೇಳಿದರು.

<><><><>

ಅಮೆರಿಕದ ಹೆಚ್ಚುವರಿ ಸುಂಕ ಹೇರಿಕೆಯ ವಿರುದ್ಧ ಭಾರತ ತನ್ನ ಪ್ರತಿಕ್ರಿಯೆಯನ್ನು ಪುನರುಚ್ಚರಿಸಿದೆ. ಅಮೆರಿಕದ ಈ ಕ್ರಮಗಳು ಅನ್ಯಾಯ, ಅಸಮಂಜಸ ಮತ್ತು ನ್ಯಾಯಸಮ್ಮತವಲ್ಲ ಎಂದು ಭಾರತ ಹೇಳಿದೆ. ಭಾರತದ ಮೇಲೆ ಶೇಕಡಾ ೨೫ ರಷ್ಟು ಹೆಚ್ಚುವರಿ ಸುಂಕವನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ.

ಭಾರತ ತನ್ನ ರಾಷ್ಟ್ರೀಯ ಹಿತಾಸಕ್ತಿಗಳನ್ನು ರಕ್ಷಿಸಲು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

ಆರ್‌ಜೆಡಿ ನಾಯಕ ತೇಜಸ್ವಿ ಯಾದವ್, ಎರಡು ಮತದಾರರ ಗುರುತಿನ ಚೀಟಿಗಳನ್ನು ಹೊಂದಿದ್ದಾರೆ ಎನ್ನುವ ಆರೋಪಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗ ಮತ್ತೊಮ್ಮೆ ಅವರಿಗೆ ನೋಟಿಸ್ ಜಾರಿ ಮಾಡಿದೆ. ಆಗಸ್ಟ್ ೨ ರಂದು ತೇಜಸ್ವಿ ಯಾದವ್ ಅವರು ಮಾಧ್ಯಮಗಳ ಮುಂದೆ ಪ್ರದರ್ಶಿಸಿದ ಮತದಾರರ ಗುರುತಿನ ಚೀಟಿ ಬಗ್ಗೆ ಆಯೋಗವು ವಿವರಗಳನ್ನು ಕೋರಿದೆ. ಅಂದು ತೇಜಸ್ವಿ ಯಾದವ್ ಅವರು ಪ್ರದರ್ಶಿಸಿದ ಮತದಾರರ ಗುರುತಿನ ಚೀಟಿಯನ್ನು ಚುನಾವಣಾ ಆಯೋಗ ವಿತರಿಸಿಲ್ಲ ಎಂದು ಆಯೋಗ ಹೇಳಿತ್ತು. ಇನ್ನೊಂದೆಡೆ, ಬಿಹಾರದಲ್ಲಿ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕುರಿತು ಆರ್‌ಜೆಡಿ ಪಕ್ಷ ಎತ್ತಿರುವ ಪ್ರಶ್ನೆಗಳಿಗೆ ಚುನಾವಣಾ ಆಯೋಗವು ಮೊದಲು ಪ್ರತಿಕ್ರಿಯಿಸಬೇಕು ಎಂದು ತೇಜಸ್ವಿ ಯಾದವ್ ಹೇಳಿದ್ದಾರೆ.

<><><><>

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಧರಾಲಿ ಮತ್ತು ಹರ್ಸಿಲ್ ಪ್ರದೇಶಗಳಲ್ಲಿ ಮೇಘ ಸ್ಫೋಟ ಮತ್ತು ಪ್ರವಾಹದ ಹಿನ್ನೆಲೆಯಲ್ಲಿ ಇಂದು ಮುಂಜಾವಿನಿಂದಲೇ ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಗಳು ಯುದ್ಧೋಪಾದಿಯಲ್ಲಿ ನಡೆಯುತ್ತಿವೆ. ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಉತ್ತರಕಾಶಿಯಲ್ಲಿದ್ದು, ಪರಿಸ್ಥಿತಿಯನ್ನು ಖುದ್ದಾಗಿ ಮೇಲ್ವಿಚಾರಣೆ ನಡೆಸುತ್ತಿದ್ದಾರೆ. ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ- ಎನ್‌ಡಿಆರ್‌ಎಫ್, ರಾಜ್ಯ ವಿಪತ್ತು ನಿರ್ವಹಣಾ ಪಡೆ - ಎಸ್‌ಡಿಆರ್‌ಎಫ್, ಭಾರತೀಯ ಸೇನೆ, ಐಟಿಬಿಪಿ ಮತ್ತು ಸ್ಥಳೀಯ ಆಡಳಿತವು ಜಂಟಿಯಾಗಿ ಪರಿಹಾರ ಕಾರ್ಯಗಳನ್ನು ಪೂರ್ಣ ಸಿದ್ಧತೆಯೊಂದಿಗೆ ನಡೆಸುತ್ತಿವೆ ಎಂದು ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>